## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮೂಲತ: ಹಟ್ಟಿ ಚಿನ್ನದ ಗಣಿ ಕಂಪನಿಯ ನೌಕರರಾದ ಶ್ರೀ ರವಿಕುಮಾರ್, ಪ್ರಧಾನ ಫೋರ್‌ಮನ್ (ಜಿ-3) ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವ್ಯಾಪ್ತಿಯಲ್ಲಿ ಒಪ್ಪಂದದ ಆಧಾರದ ಮೇಲೆ ನೇಮಿಸಿದ ಸೇವೆಯನ್ನು ವಿಸ್ತರಿಸಿ ಮುಂದುವರೆಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 201 ಸೇಶಿಕಾ 2009, ದಿನಾಂಕ. 05-05-2010.
2. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 192 ಸೇಶಿಕಾ 2011. ದಿನಾಂಕ 24-08-2011
3. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 188 ಸೇಶಿಕಾ 2011. ದಿನಾಂಕ 27-08-2012
4. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 172 ಸೇಶಿಕಾ 2013 ದಿನಾಂಕ 23-08-2013
5. ಸರ್ಕಾರದ ಆದೇಶ ಸಂಖ್ಯೆ 173 ಸೇಶಿಕಾ 2014 ದಿನಾಂಕ 27-08-2014
6. ಸರ್ಕಾರದ ಆದೇಶ ಸಂಖ್ಯೆ 218 ಸೇಶಿಕಾ 2015 ದಿನಾಂಕ 06.08.2015
7. ಸರ್ಕಾರದ ಆದೇಶ ಸಂಖ್ಯೆ 186 ಸೇಶಿಕಾ 2016 ದಿನಾಂಕ 20.09.2016

ಪ್ರಸ್ತಾವನೆ:-

ಹಟ್ಟಿ ಚಿನ್ನದ ಗಣಿ ಕಂಪನಿಯ ನೌಕರರಾದ ಶ್ರೀ ರವಿಕುಮಾರ್, ಪ್ರಧಾನ ಫೋರ್‌ಮನ್ (ಜಿ-3) ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ ಇಲ್ಲಿನ ಆಕೃತಿ ರಚನಾಕಾರರ ಹುದ್ದೆಯಲ್ಲಿ ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15 (1) (ಬಿ) (ii) ರನ್ವಯ ಒಂದು ವರ್ಷದ ಮಟ್ಟಿಗೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 05.05.2010ರ ಸರ್ಕಾರದ ಆದೇಶದಲ್ಲಿ ಒಪ್ಪಂದದ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿತ್ತು. ತದನಂತರ ಮೇಲೆ ಕ್ರಮ ಸಂಖ್ಯೆ (2) ರಿಂದ (7) ರ ದಿನಾಂಕಗಳ ಆದೇಶಗಳಲ್ಲಿ ಸದರಿಯವರ ಒಪ್ಪಂದದ ಆಧಾರದ ಮೇಲಿನ ಸೇವೆಯನ್ನು ವಿಸ್ತರಿಸಿ ಮುಂದುವರೆಸಿಕೊಂಡು ಬರಲಾಗುತ್ತಿದ್ದು ದಿನಾಂಕ 23.08.2017ಕ್ಕೆ ಮುಕ್ತಾಯಗೊಳ್ಳಲಿದೆ.

ಶ್ರೀ ರವಿಕುಮಾರ್, ಪ್ರಧಾನ ಫೋರ್‌ಮನ್ (ಜಿ-3) ರವರ ಒಪ್ಪಂದದ ಆಧಾರದ ಸೇವೆಯು 7ನೇ ವರ್ಷವನ್ನು ಪೂರ್ಣಗೊಳಿಸಿದ್ದು, ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಸರ್ಕಾರವು ಶ್ರೀ ರವಿಕುಮಾರ್, ಪ್ರಧಾನ ಫೋರ್‌ಮನ್ (ಜಿ-3)ಇವರ ಸೇವೆಯನ್ನು ಪಂಚಾಯತ್ ರಾಜ್

ಮು.ತಿ.ನೋ.

ಇಂಜಿನಿಯರಿಂಗ್ ಇಲಾಖೆಯಲ್ಲಿ ದಿನಾಂಕ 24.08.2017 ರಿಂದ ಜಾರಿಗೆ ಬರುವಂತೆ ಮುಂದಿನ ಒಂದು ವರ್ಷದ ಅವಧಿಗೆ ವಿಸ್ತರಿಸಿ ಮುಂದುವರೆಸಲು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ. ಗ್ರಾಅಪ 164 ಸೇಶಿಕಾ 2017, ಬೆಂಗಳೂರು, ದಿನಾಂಕ. 16.08.2017

ಪ್ರಸ್ತಾವನೆಯಲ್ಲಿ ನೀಡಿರುವ ವಿವರಗಳ ಹಿನ್ನೆಲೆಯಲ್ಲಿ, ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15 (1) (ಬಿ) (ii) ರನ್ವಯ ದಿನಾಂಕ 5.5.2010ರ ಆದೇಶದಲ್ಲಿ ವಿಧಿಸಿರುವ ಷರತ್ತು ಮತ್ತು ನಿಬಂದನೆಗಳಿಗೆ ಒಳಪಟ್ಟು ಹಟ್ಟಿ ಚಿನ್ನದ ಗಣಿ ಕಂಪನಿಯ ನೌಕರರಾದ ಶ್ರೀ ರವಿಕುಮಾರ್, ಪ್ರಧಾನ ಫೋರ್‌ಮನ್ (ಜಿ-3) ಇವರನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಸಿರಗುಪ್ಪ ಇಲ್ಲಿನ ಕಿರಿಯ ಇಂಜಿನಿಯರ್ ಹುದ್ದೆಯಲ್ಲಿಯೇ ದಿನಾಂಕ 24-08-2017 ರಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಇವರ ಗುತ್ತಿಗೆ ಸೇವೆಯನ್ನು ಮುಂದುವರಿಸಿ ಆದೇಶಿಸಿದೆ.

(ಮಾನ್ಯ ಮುಖ್ಯ ಮಂತ್ರಿಯವರಿಂದ
ಅನುಮೋದಿಸಲ್ಪಟ್ಟಿದೆ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/08/2017

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
7. ಸರ್ಕಾರದ ಅಧೀನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ.
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
10. ಶ್ರೀ ರವಿಕುಮಾರ್, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಸಿರಗುಪ್ಪ.
11. ಕಂಪ್ಯೂಟರ್ ಸೆಲ್ / ಹೆಚ್ಚುವರಿ ಪ್ರತಿ / ರಕ್ಷಾ ಕಡತ.